## ಕರ್ನಾಟಕ ಸರ್ಕಾರ

**ಸಂಖ್ಯೆ: ಇಡಿ 19 ಡಿಎಆರ್ 2019**

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು-1, ದಿನಾಂಕ:06/02/2019.

**ಇವರಿಂದ,**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ.

**ಇವರಿಗೆ,**
(1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು-560 001.
(2) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ -580 001.
(3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ-585 101.

ಮಾನ್ಯರೆ,

**ವಿಷಯ:-** ಪಿಂಚಣಿ ಪ್ರಕರಣಗಳನ್ನು ನಿಗಧಿತ ಕಾಲಾವಧಿಯೊಳಗೆ ಚುರುಕಾಗಿ ಮತ್ತು ತ್ವರಿತವಾಗಿ ಇತ್ಯರ್ಥಗೊಳಿಸುವ ಬಗ್ಗೆ.

**ಉಲ್ಲೇಖ:-** ಸರ್ಕಾರದ ಸುತ್ತೋಲೆ ಸಂಖ್ಯೆ:ಆಇ (ವಿಶೇಷ)/101/ಪಿಇಎನ್/2018, ದಿನಾಂಕ:08/12/2018.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರಿ ಸುತ್ತೋಲೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸುತ್ತಾ, ಸರ್ಕಾರಿ ನೌಕರರ / ಅಧಿಕಾರಿಗಳ ನಿವೃತ್ತಿ ವೇತನ ಮತ್ತು ಪ್ರಕರಣಗಳನ್ನು ನಿಗಧಿತ ಕಾಲಾವಧಿಯೊಳಗೆ ಇತ್ಯರ್ಥಗೊಳಿಸದೇ ತೀರಾ ವಿಳಂಬ ಮಾಡಲಾಗುತ್ತದೆ ಎಂಬ ದೂರು ಸರ್ಕಾರದ ಗಮನಕ್ಕೆ ಬಂದಿದ್ದು, ಇಂತಹ ಪ್ರಕರಣಗಳಲ್ಲಿ ನಿವೃತ್ತಿ ವೇತನ ಮಂಜೂರು ಮಾಡುವ ಸಕ್ಷಮ ಪ್ರಾಧಿಕಾರದಿಂದ ಅಥವಾ ಸಂಬಂಧಪಟ್ಟ ನೌಕರರಿಂದ ವಸೂಲಿ ಮಾಡಬೇಕಾಗುತ್ತದೆ. ಅಲ್ಲದೆ, ಅಂತಹ ವಿಳಂಬಕ್ಕೆ ಕಾರಣರಾದಂತಹ ಅಧಿಕಾರಿ ಮತ್ತು ನೌಕರರು ಶಿಸ್ತು ಕ್ರಮಕ್ಕೂ ಬದ್ಧರಾಗುತ್ತಾರೆಂಬ ಅಂಶಗಳನ್ನು ಗಮನದಲ್ಲಿನಕೊಳ್ಳತಕ್ಕದೆಂದು ತಿಳಿಸಲಾಗಿದೆ. ಅದರಂತೆ, ಸದರಿ ಪ್ರಸ್ತಾವನೆಗಳನ್ನು ನಿಗಧಿತ ಅವಧಿಯಲ್ಲಿ ಇತ್ಯರ್ಥಗೊಳಿಸಲು ಕ್ರಮಕೈಗೊಳ್ಳುವಂತೆ ಈ ಮೂಲಕ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಜಿ.ಡಿ. ನಾಗೇಂದ್ರ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಆಡಳಿತ).

ADM II
18897
8/2/19

**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ(ವಿಶೇಷ)/101/ಪಿಇಎನ್/2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 08-12-2018.

## ಸುತ್ತೋಲೆ

ವಿಷಯ: ಪಿಂಚಣಿ ಪ್ರಕರಣಗಳನ್ನು ನಿಗಧಿತ ಕಾಲಾವಧಿಯೊಳಗೆ ಚುರುಕಾಗಿ ಮತ್ತು ತ್ವರಿತವಾಗಿ ಇತ್ಯರ್ಥಗೊಳಿಸುವ ಬಗ್ಗೆ.

***

1. ಸರ್ಕಾರಿ ನೌಕರನು ಚಾಲ್ತಿಯಲ್ಲಿರುವ ನಿವೃತ್ತಿ ವೇತನ ಪಾವತಿ ಆದೇಶ (Pension Payment Order) ವಿಲ್ಲದೆ ವಯೋನಿವೃತ್ತಿ ಹೊಂದಬಾರದೆಂಬುದು ಸರ್ಕಾರದ ಘೋಷಿತ ನೀತಿಯಾಗಿದೆ.
2. ಆದಾಗ್ಯೂ, ಸರ್ಕಾರಿ ನೌಕರರ ಮತ್ತು ಅಧಿಕಾರಿಗಳ ನಿವೃತ್ತಿ ವೇತನ ಪ್ರಕರಣಗಳನ್ನು ನಿಗಧಿತ ಕಾಲಾವಧಿಯೊಳಗೆ ಇತ್ಯರ್ಥಗೊಳಿಸದೆ ತೀರಾ ವಿಳಂಬ ಮಾಡಲಾಗುತ್ತಿದೆ ಎಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿವೆ. ನಿಗಧಿತ ಕಾಲಾವಧಿಯೊಳಗೆ ಮಹಾಲೇಖಪಾಲರಿಗೆ ಕಳುಹಿಸುವ ಮಹತ್ವವನ್ನು ತಿಳಿಯದಿರುವುದು ಎದ್ದು ಕಾಣುತ್ತದೆ. ಆದುದರಿಂದ, ಸದರಿ ಸೂಚನೆಗಳನ್ನು ಮತ್ತೊಮ್ಮೆ ಒತ್ತಿಹೇಳುವ ಅವಶ್ಯಕತೆ ಇದೆಯೆಂದು ಸರ್ಕಾರವು ಮನಗಂಡಿದೆ.
3. ಆದಕಾರಣ, ಇನ್ನು ಮುಂದೆ ವಯೋನಿವೃತ್ತಿ ಹೊಂದಲಿರುವ ಸರ್ಕಾರಿ ನೌಕರರ ನಿವೃತ್ತಿ ವೇತನ ದಾಖಲೆಗಳನ್ನು 12 ತಿಂಗಳು ಮುಂಚಿತವಾಗಿ (ಪ್ರಸ್ತುತ ಅನುಸರಿಸುತ್ತಿರುವ 6 ತಿಂಗಳ ಅವಧಿಯ ರೂಢಿಗತ ಪದ್ಧತಿಯನ್ನು ಮಾರ್ಪಡಿಸಿ) ತಯಾರಿಸಲು ಪ್ರಾರಂಭಿಸಿ, ಹಾಗೆ ತಯಾರಿಸಿದ ಸಂಪೂರ್ಣ ದಾಖಲೆಗಳನ್ನು, ವಯೋ ನಿವೃತ್ತಿಗೆ ಕನಿಷ್ಠ 03 ತಿಂಗಳ ಮುಂಚಿತವಾಗಿ ಮಹಾಲೇಖಪಾಲರಿಗೆ ಕಡ್ಡಾಯವಾಗಿ ಕಳುಹಿಸುವ ಮತ್ತು ವಯೋನಿವೃತ್ತಿ ಹೊಂದಲಿರುವ ಪತ್ರಾಂಕಿತ ಸರ್ಕಾರಿ ಅಧಿಕಾರಿಗಳ ಸಂಬಂಧದಲ್ಲಿ ನಮೂನೆ 7-ಎ ರಲ್ಲಿ ಅವಶ್ಯಕ ಮಾಹಿತಿಯನ್ನು, ಮಂಜೂರಾತಿಯೊಂದಿಗೆ, ವಯೋನಿವೃತ್ತಿಯ ದಿನಾಂಕಕ್ಕೆ ಒಂದು ತಿಂಗಳ ಮುಂಚಿತವಾಗಿ ಮಹಾಲೇಖಪಾಲರಿಗೆ ಕಡ್ಡಾಯವಾಗಿ ಕಳುಹಿಸುವ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದೆಂದು ಈ ಮೂಲಕ ಸೂಚಿಸಲಾಗಿದೆ.

4. ಮೇಲಿನ ಸೂಚನೆಗಳನ್ನು ಕಛೇರಿ ಮುಖ್ಯಸ್ಥರ ಗಮನಕ್ಕೆ ತಕ್ಷಣವೇ ತರುತ್ತಾ, ಅವುಗಳನ್ನು ಚಾಚುತಪ್ಪದೆ ಪಾಲಿಸುವಂತೆ ನಿರ್ದೇಶನ ನೀಡಲು ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳನ್ನು ಮತ್ತು ಇಲಾಖಾ ಮುಖ್ಯಸ್ಥರನ್ನು ಕೋರಲಾಗಿದೆ.

5. ನಿವೃತ್ತಿ ವೇತನವನ್ನು ತಡವಾಗಿ ಪಾವತಿಸಿದಲ್ಲಿ ಬಡ್ಡಿಯನ್ನು ಪಾವತಿಸಬೇಕಾಗುತ್ತದೆ. ಹಾಗೆ ಪಾವತಿಸಬೇಕಾದ ಬಡ್ಡಿಯನ್ನು ವಿಳಂಬಕ್ಕೆ ಕಾರಣರಾದಂತಹ ನಿವೃತ್ತಿ ವೇತನ ಮಂಜೂರು ಮಾಡುವ ಸಕ್ಷಮ ಪ್ರಾಧಿಕಾರದಿಂದ ಅಥವಾ ಸಂಬಂಧಪಟ್ಟ ನೌಕರರಿಂದ ವಸೂಲಿ ಮಾಡಬೇಕಾಗುತ್ತದೆ. ಅಲ್ಲದೆ, ಅಂತಹ ವಿಳಂಬಕ್ಕೆ ಕಾರಣರಾದಂತಹ ಅಧಿಕಾರಿ ಮತ್ತು ನೌಕರರು ಶಿಸ್ತು ಕ್ರಮಕ್ಕೂ ಬದ್ಧರಾಗುತ್ತಾರೆಂಬ ಅಂಶಗಳನ್ನು ಗಮನದಲ್ಲಿರಿಸಿಕೊಳ್ಳತಕ್ಕದೆಂದು ಒತ್ತಿ ಹೇಳಲಾಗಿದೆ.

(ತ.ಮ. ವಿಜಯ್ ಭಾಸ್ಕರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

**ಇವರಿಗೆ,**

ಸಂಕಲನಾಧಿಕಾರಿ, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ಸಂಚಿಕೆಯಲ್ಲಿ ಪ್ರಕಟಗೊಳಿಸಲು.

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು, ಲೆಕ್ಕಗಳು/ಲೆಕ್ಕಪರಿಶೋಧನೆ, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
3. ಎಲ್ಲಾ ಪ್ರಾದೇಶಿಕ ಆಯುಕ್ತರು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಎಲ್ಲಾ ಇಲಾಖಾ ಮುಖ್ಯಸ್ಥರು.
6. ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು.
7. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
8. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:-ಎಡಿಎಂ2[1]/ಪಿ.ಮಂ.ಮು.ಸು.ಸೂ-01/2018-19

ದಿನಾಂಕ:-29-03-2019.

-:ಜ್ಞಾಪನ:-

ವಿಷಯ:-ಪಿಂಚಣಿ ಪ್ರಕರಣಗಳನ್ನು ನಿಗಧಿತ ಕಾಲಾವಧಿಯೊಳಗೆ ಚುರುಕಾಗಿ ಮತ್ತು ತ್ವರಿತವಾಗಿ ಇತ್ಯರ್ಥಗೊಳಿಸುವ ಬಗ್ಗೆ.

ಉಲ್ಲೇಖ:-1.ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಆಇ(ವಿಶೇಷ)/101/ಪಿಇಎನ್ 2018 ದಿನಾಂಕ: 08/12/2018.

2.ಸರ್ಕಾರದ ಪತ್ರ ಸಂಖ್ಯೆ: ಇಡಿ 19 ಡಿಎಆರ್ 2019. ದಿನಾಂಕ:06/02/2019.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-01 ರ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಸುತ್ತೋಲೆಯಲ್ಲಿನ ಅಂಶಗಳಂತೆ ಮತ್ತು ಉಲ್ಲೇಖ-02 ರ ಸರ್ಕಾರದ ಪತ್ರದಲ್ಲಿ ತಿಳಿಸಲಾಗಿರುವಂತೆ, ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಕ್ಷಮ ಪ್ರಾಧಿಕಾರಿಗಳು/ ಸಂಬಂಧಿಸಿದ ಎಲ್ಲಾ ಕಛೇರಿಗಳ ಮುಖ್ಯಸ್ಥರುಗಳು ತಮ್ಮ ವ್ಯಾಪ್ತಿಯಲ್ಲಿನ ಪಿಂಚಣಿ ಪ್ರಕರಣಗಳನ್ನು ನಿಗಧಿತ ಕಾಲಾವಧಿಯೊಳಗೆ ಚುರುಕಾಗಿ ಮತ್ತು ತ್ವರಿತವಾಗಿ ಇತ್ಯರ್ಥಗೊಳಿಸುವ ಬಗ್ಗೆ ಸೂಕ್ತ ಕ್ರಮಗಳನ್ನು ಜರುಗಿಸತಕ್ಕದ್ದು. ಇಲ್ಲವಾದಲ್ಲಿ ವಿಳಂಬಕ್ಕೆ ಆಸ್ಪದ ನೀಡಿದಂತಹ ಅಧಿಕಾರಿಗಳು ಮತ್ತು ನೌಕರರು ದಂಡ ವಸೂಲಾತಿ ಕ್ರಮ ಮತ್ತು ಅನಿವಾರ್ಯವಾಗಿ ಶಿಸ್ತು ಕ್ರಮಗಳಿಗೆ ಗುರಿಯಾಗುತ್ತಾರೆಂದು ಈ ಮೂಲಕ ತಿಳಿಯಪಡಿಸಿದೆ.

(ಎಸ್.ಜಯಕುಮಾರ್)
ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)



ಇವರಿಗೆ,

01. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕಛೇರಿ / ಪ್ರೌಢ ಶಾಲಾ ಮುಖ್ಯಸ್ಥರುಗಳಿಗೆ/ ಈ ಕಛೇರಿಯ ಎಲ್ಲಾ ಅಧಿಕಾರಿಗಳಿಗೆ/ಅಧೀಕ್ಷಕರುಗಳಿಗೆ/ ಇಲಾಖೆಯ ಅಂತರ್ಜಾಲ ತಾಣದಲ್ಲಿ ಅಳವಡಿಸಲು.